ಶಿ-72
ಫ-178

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪಶ್ಚಿಮ ಶಿಕ್ಷಕರ ಕ್ಷೇತ್ರ) ರವರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ.**

**ವಿಷಯ:-**

" ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯವು ಬೆಂಗಳೂರಿನಲ್ಲಿ ಪ್ರಾರಂಭಗೊಂಡು ಮೊದಲು ವಿಶ್ವವಿದ್ಯಾಲಯದ ಚಟುವಟಿಕೆಗಳನ್ನು ಕೈಗೊಳ್ಳಲು ವಿಶೇಷಾಧಿಕಾರಿಯನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಸದರಿ ಅಧಿಕಾರಿಯು ಅಗತ್ಯತೆಗನುಗುಣವಾಗಿ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ಸಂಚಿತ ವೇತನ ಆಧಾರದ ಮೇಲೆ ಹಲವಾರು ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿದ್ದರು. ಇದರಲ್ಲಿ ಪ್ರನೂಪ್ ಎಸ್. ಇವರು ಕಛೇರಿ ಸಹಾಯಕ (ಗ್ರೂಪ್ ಡಿ) ಹುದ್ದೆಯಡಿ ನೇಮಕಗೊಂಡಿದ್ದು, ಇವರಿಗೆ ಸೆಪ್ಟಂಬರ್ 2019ರ ಅರ್ಧ ತಿಂಗಳ ವೇತನ ಮಾತ್ರ ನೀಡಿದ್ದು, ಬಾಕಿ 13 ತಿಂಗಳ ವೇತನ ನೀಡಿರುವುದಿಲ್ಲ. ಇದರ ಸಂಬಂಧ ಸದನದಲ್ಲಿ ಸರ್ಕಾರದ ಗಮನ ಸೆಳೆದಾಗ ಇವರನ್ನು ಕೆಲಸದಿಂದ ಈಗಾಗಲೇ ಬಿಡುಗಡೆ ಮಾಡಲಾಗಿದ್ದು, ಇವರಿಗೆ ಬಾಕಿ ಬರಬೇಕಾಗಿರುವ ವೇತನವನ್ನು ಪಾವತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತದೆ. ಅನುದಾನ ಒದಗಿದ ನಂತರ ಪಾವತಿ ಮಾಡಲಾಗುವುದು ಎಂದು ಸಚಿವರು ಭರವಸೆ ನೀಡಿದ್ದರು. ಆ ಭರವಸೆ ಭರವಸೆಯಾಗಿಯೇ ಉಳಿದಿರುತ್ತದೆ. ಬೋಧಕೇತರ ಸಿಬ್ಬಂದಿಯ ನೇಮಕಕ್ಕೆ ಸಂಬಂಧಿಸಿದ ಯಾವುದೇ ದಾಖಲೆಗಳು ಲಭ್ಯವಿಲ್ಲವೆಂದು ಇಲಾಖೆ ಹೇಳಿರುವುದು ಸಮಂಜಸವಲ್ಲವೆಂದು ಸಿಬ್ಬಂದಿಗಳು ಸಹಿ ಮಾಡಿದ ಹಾಜರಾತಿ ಪುಸ್ತಕವನ್ನು ಪರಿಶೀಲಿಸಿ ಪ್ರನೂಪ್ ಎಸ್. ಮತ್ತು ಇವರ ಜೊತೆಯಲ್ಲಿಯೇ ಸದರಿ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿದ ಎಲ್ಲಾ ಸಿಬ್ಬಂದಿಗಳಿಗೂ ಬಾಕಿ ಇರುವ ವೇತನವನ್ನು ಪಾವತಿ ಮಾಡುವಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ."

**ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ:**

ಪ್ರಥಮ ಕುಲಪತಿಯನ್ನು ನೇಮಿಸುವವರೆಗೆ, ಏಕಾತ್ಮಕ ಸ್ವರೂಪದ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸ್ಥಾಪನೆಗೆ ಕ್ರಮಗಳನ್ನು ಕೈಗೊಳ್ಳುವ ಉದ್ದೇಶಕ್ಕಾಗಿ ನೇಮಿಸಲಾಗಿರುವ ವಿಶೇಷಾಧಿಕಾರಿಯು ಕರ್ನಾಟಕ ರಾಜ್ಯ ವಿಶ್ವದಿಯಾಲಯಗಳ (ತಿದ್ದುಪಡಿ) ಅಧಿನಿಯಮ 2019(2019ರ ಕರ್ನಾಟಕ ಅಧಿನಿಯಮ ಸಂಖ್ಯೆ: 15)ರ ಪ್ರಕರಣ 17ರಲ್ಲಿ ಉಪಬಂಧಿಸುವ ಮೇರೆಗೆ, ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂತೆ ಅನುಕ್ರಮವಾಗಿ ವಿಶ್ವವಿದ್ಯಾಲಯದ ಮತ್ತು ಕುಲಪತಿಗಳ ಅಂಥ ಅಧಿಕಾರಗಳನ್ನು ಚಲಾಯಿಸಬೇಕಾಗುತ್ತದೆ ಹಾಗೂ ಅಂಥ ಪ್ರಕಾರ್ಯಗಳನ್ನು ನಿರ್ವಹಿಸಬೇಕಾಗುತ್ತದೆ. ಆದರೆ ಸರ್ಕಾರವು ಅಂಥ ಅಧಿಕಾರಗಳನ್ನು ನಿರ್ದಿಷ್ಟಪಡಿಸದೇ ಇರದ ಸನ್ನಿವೇಶದಲ್ಲಿ ಸರ್ಕಾರದ ಪೂರ್ವಾನುಮೋದನೆಯನ್ನು ಪಡೆಯದೇ ಹಾಗೂ ಸರ್ಕಾರದ ಗಮನಕ್ಕೆ ತಾರದೇ ಮತ್ತು ವೇತನ ಪಾವತಿಗೆ ಹಣಕಾಸಿನ ಅವಕಾಶ ಕಲ್ಪಿಸಿಕೊಳ್ಳದೇ ಅಂದಿನ ವಿಶೇಷಾಧಿಕಾರಿಗಳು ತಾತ್ಕಾಲಿಕ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯನ್ನು ನೇಮಿಸಿಕೊಂಡಿರುತ್ತಾರೆ.

-2

ಮುಂದುವರೆದು, ಬೋಧಕೇತರ ಸಿಬ್ಬಂದಿಯನ್ನು ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿರುವುದಕ್ಕೆ ಸಂಬಂಧಿಸದಂತೆ ಯಾವುದೇ ಆದೇಶಗಳು ಹಾಗೂ ಹೊರ ಗುತ್ತಿಗೆ ಸಂಬಂಧಿ ದಾಖಲೆಗಳಾಗಲೀ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವುದಿಲ್ಲ.

ಖಾಯಂ ನೇಮಕಾತಿಗೆ ಅನ್ವಯವಾಗುವ ಕ್ರಮಪದ್ಧತಿ, ಮೀಸಲಾತಿ ನೀತಿ ಹಾಗೂ ಅರ್ಹತಾ ಷರತ್ತುಗಳನ್ನು ಅನ್ವಯಿಸಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ರ ಪ್ರಕರಣ-55ರನ್ವಯ 1 ವರ್ಷದ ಅವಧಿಗೆ ಮೀರದಂತೆ ಮಾತ್ರ ಅಲ್ಪಕಾಲಿಕ ಅಥವಾ ಅತಿಥಿ ಬೋಧಕ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಈ ವಿಧಾನ ತಾತ್ಕಾಲಿಕ ಬೋಧಕೇತರ ಹುದ್ದೆಗಳ ನೇಮಕಾತಿಗೂ ಅನ್ವಯಿಸುತ್ತದೆ. ಈ ಹಿನ್ನೆಲೆಯಲ್ಲಿ, 1 ವರ್ಷದ ಅವಧಿಯು ಮುಕ್ತಾಯಗೊಂಡ ನಂತರ ಅತಿಥಿ ಉಪನ್ಯಾಸಕರನ್ನು ಬಿಡುಗಡೆಗೊಳಿಸಲಾಗಿದೆ. ಮುಂದುವರೆದು, ನೇಮಕಾತಿಗೆ ಸಂಬಂಧಿಸಿದ ಯಾವುದೇ ದಾಖಲಾತಿಗಳ ಇರದ ಕಾರಣ ಬೋಧಕೇತರ ಸಿಬ್ಬಂದಿಯನ್ನು ದಿನಾಂಕ: 09-11-2020ರಂದು ಬಿಡುಗಡೆಗೊಳಿಸಲಾಗಿರುತ್ತದೆ.

ಬೋಧಕ/ಬೋಧಕೇತರ ಸಿಬ್ಬಂದಿಗೆ ವೇತನ ಪಾವತಿಯಾಗದ ಬಗ್ಗೆ ಸರ್ಕಾರದ ಗಮನಕ್ಕೆ ಬಂದ ತಕ್ಷಣ, ಅವರ ವೇತನ ಪಾವತಿಯ ನಿಟ್ಟಿನಲ್ಲಿ ಉಪಕ್ರಮಿಸಲಾಗಿದೆ ಎಂದು ಮಾತ್ರ ಸದನದಲ್ಲಿ ತಿಳಿಸಲಾಗಿತ್ತು. ವೇತನ ಪಾವತಿಗಾಗಿ ಅನುದಾನ ಒದಗಿಸುವ ಕುರಿತು ಆರ್ಥಿಕ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಯೋಜನಾ ಶಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಕೋವಿಡ್-19 ಮಾರಕ ರೋಗದ ಪ್ರಸರಣೆಯಿಂದಾಗಿ ಎದುರಾಗಿರುವ ಆರ್ಥಿಕ ಸವಾಲುಗಳ ಹಿನ್ನೆಲೆಯಲ್ಲಿ ಬಾಕಿ ವೇತನ ಪಾವತಿಗೆ ಕಾಲಮಿತಿ ನಿಗದಿಪಡಿಸುವುದು ಕಷ್ಟಸಾಧ್ಯವಾಗಿದ್ದು, ಆದ್ಯತೆ ಮೇರೆಗೆ ಕ್ರಮವಹಿಸುವುದು.

**ಸಂಖ್ಯೆ: ಇ-ಕಚೇರಿ ಸಂಖ್ಯೆ: ಇಡಿ/78/ಯುಆರ್‌ಸಿ/2022**

**(ಡಾ|| ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ ಮತ್ತು ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು